ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಪ್ರವಾಸಿ ತಾಣಗಳನ್ನಾಗಿ ಅಭಿವೃದ್ಧಿ ಪಡಿಸುವ ಕುರಿತು

ಶ್ರೀ ಗೋವಿಂದ ರಾಜು(ವಿಧಾನಸಭೆಯಿಂದ ಚುನಾಯಿತರಾದವರು) –

295 (333) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೆ. ಸಿ. ವ್ಯಾಲಿ ನೀರಿನಿಂದ ಕೋಲಾರ ತಾಲ್ಲೂಕಿನ ನರಸಾಪುರ ಕೆರೆ, ಅಮ್ಮೇರಹಳ್ಳಿ ಕೆರೆ ಹಾಗೂ ಅಮಾನಿ ಕೆರೆಗಳು ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿದ್ದು ಹಾಗೂ ಸೋಮಾಂಬುದಿ ಅಗ್ರಹಾರ ಕೆರೆಯೂ ಸಹ ಅತೀ ದೊಡ್ಡ ಕೆರೆಯಾಗಿರುವುದರಿಂದ ಇವುಗಳನ್ನು ಪ್ರವಾಸೀತಾಣಗಳನ್ನಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರ ಕಳೆದ 3 ವರ್ಷಗಳಲ್ಲಿ ಅನುದಾನವನ್ನೇನಾದರೂ ನೀಡಿದೆಯೇ;

(ಇ) ಹಾಗಿಲ್ಲದಿದ್ದಲ್ಲಿ, ಈ ಕೆರೆಗಳನ್ನು ಪ್ರವಾಸೀತಾಣಗಳನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು;

(ಈ) ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು? (ವಿವರಗಳನ್ನು ನೀಡುವುದು)